ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ದಾವಣಗೆರೆ,
ಇವರ ಕಛೇರಿ ಪ್ರಕಟಣೆ ಅಧಿಸೂಚನೆ ಸಂಖ್ಯೆಃ ಆಡಳಿತ 01/2018, ದಿನಾಂಕಃ 14-03-2018.

ವಿಷಯಃ ದಾವಣಗೆರೆ ಜಿಲ್ಲಾ ನ್ಯಾಯಾಂಗ ಘಟಕದಲ್ಲಿ ಖಾಲಿ ಇರುವ ಶೀಘ್ರಲಿಪಿಗಾರರ ಮತ್ತು ಬೆರಳಚ್ಚುಗಾರರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಬಗ್ಗೆ.

ಉಲ್ಲೇಖಃ

1. ಸರ್ಕಾರಿ ಆದೇಶ ಸಂಖ್ಯೆಃ LAW 243 LAC 2013 (Part-I), ದಿಃ 01-02-2017.
2. ಗೌ. ಕರ್ನಾಟಕ ಉಚ್ಚ ನ್ಯಾಯಾಲಯದ ಪತ್ರ ಸಂಖ್ಯೆಃ LCA-II 128/2012, ದಿಃ 13-02-2017.
3. ಸರ್ಕಾರಿ ಆದೇಶ ಸಂಖ್ಯೆಃ LAW 137 LCE 2014 ದಿಃ 28-03-2016.
4. ಈ ಕಛೇರಿಯ ಅಧಿಸೂಚನೆ ಸಂಖ್ಯೆಃ 1/2016 ಮತ್ತು 1/2017.
5. ಕರ್ನಾಟಕ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರೆ ಹುದ್ದೆಗಳ) (ನೇಮಕಾತಿ) ನಿಯಮಗಳು, 1982.
6. ಕರ್ನಾಟಕ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರೆ ಹುದ್ದೆಗಳ) (ನೇಮಕಾತಿ) (ತಿದ್ದುಪಡಿ) ನಿಯಮಗಳು, 2007.
7. ಈ ಕಛೇರಿ ಟಿಪ್ಪಣಿ ಮತ್ತು ಅದರ ಮೇಲಿನ ಆದೇಶ.

***********

ದಾವಣಗೆರೆ ಜಿಲ್ಲೆಯ ವಿವಿಧ ನ್ಯಾಯಾಲಯಗಳಲ್ಲಿ ಖಾಲಿ ಇರುವ ಶೀಘ್ರಲಿಪಿಗಾರರ - 07 ಹುದ್ದೆಗಳಿಗೆ ಮತ್ತು ಬೆರಳಚ್ಚುಗಾರರ - 01 ಹುದ್ದೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದ್ದು, ಈ ಅಧಿಸೂಚನೆಯೊಂದಿಗೆ ಲಗತ್ತಿಸಿರುವ ನಿಗದಿತ ಅರ್ಜಿ ನಮೂನೆಯಲ್ಲಿ ಬೆರಳಚ್ಚು ಅಥವಾ ಗಣಕೀಕೃತ ಅರ್ಜಿಗಳನ್ನು ರಚಿಸಿಕೊಂಡು ಅಭ್ಯರ್ಥಿಗಳು ಅರ್ಜಿಯಲ್ಲಿ ಹುದ್ದೆಗೆ ಸಂಬಂಧಿಸಿದಂತೆ ಎಲ್ಲಾ ಅಂಕಣಗಳಲ್ಲಿ ಮಾಹಿತಿಯನ್ನು ಭರ್ತಿ ಮಾಡಿ ದಿಃ 28-04-2018 ರ ಸಂಜೆ 5.00 ಗಂಟೆಯೊಳಗಾಗಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ದಾವಣಗೆರೆ ಇವರಿಗೆ ತಲುಪುವಂತೆ ಸಲ್ಲಿಸತಕ್ಕದ್ದು. ಇದರ ಸಂಪೂರ್ಣ ಮಾಹಿತಿಯನ್ನು ಈ ಕಛೇರಿಯ ವೆಬ್‌ಸೈಟ್ ವಿಳಾಸ http://ecourts.gov.in/davangere ರಲ್ಲಿ ಲಭ್ಯವಿದ್ದು, ಡೌನ್‌ಲೋಡ್ ಮೂಲಕ ಪಡೆಯಬಹುದು.

**ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕಃ 28-04-2018 ರ ಸಂಜೆ 5.00 ಗಂಟೆಯವರೆಗೆ.**

**ಹುದ್ದೆಗಳ ವರ್ಗೀಕರಣ ::**

1. ಶೀಘ್ರಲಿಪಿಗಾರರು :- ಹುದ್ದೆಗಳ ಸಂಖ್ಯೆ-07 (06 ಹಿಂಬಾಕಿ ಹುದ್ದೆಗಳನ್ನು ಸೇರಿಸಿ)

ವೇತನ ಶ್ರೇಣಿಃ ರೂ. 14550-350-15600-400-17200-450-19000-500-21000-600-24600-700-26700 ಮತ್ತು ಇತರೆ ಭತ್ಯೆಗಳು.

| ಮೀಸಲಾತಿ | ಹುದ್ದೆಗಳ ವರ್ಗೀಕರಣ | | | | | |
|---|---|---|---|---|---|---|
| | ಸಾ.ಅ. | ಪ.ಜಾ. | 2ಎ | 2ಬಿ | 3ಎ | ಒಟ್ಟು |
| ಇತರೆ | - | - | - | 1* | 1* | 2 |
| ಗ್ರಾಮೀಣ | - | 1* | - | - | - | 1 |
| ಮಾ.ಸೈ. | 1* | - | - | - | - | 1 |
| ಅಂ.ವಿ. | 1* | 1*# | 1# | - | - | 3 |
| ಒಟ್ಟು | 2 | 2 | 1 | 1 | 1 | 7 |

2. ಬೆರಳಚ್ಚುಗಾರರು :- ಹುದ್ದೆಗಳ ಸಂಖ್ಯೆ-01

ವೇತನ ಶ್ರೇಣಿಃ ರೂ. 11600-200-12000-250-13000-300-14200-350-15600-400-17200-450-19000-500-21000 ಮತ್ತು ಇತರೆ ಭತ್ಯೆಗಳು.

ಮೀಸಲಾತಿ :- ಸಾಮಾನ್ಯ ಅರ್ಹತೆ (ಮಹಿಳೆ)

ಸಾ.ಅ. - ಸಾಮಾನ್ಯ ಅರ್ಹತೆ, ಪ.ಜಾ. - ಪರಿಶಿಷ್ಟ ಜಾತಿ, ಅಂ.ವಿ. - ಅಂಗವಿಕಲ, ಮಾ.ಸೈ.-ಮಾಜಿ ಸೈನಿಕ,

* ಹಿಂಬಾಕಿ ಹುದ್ದೆಗಳು.

# ದೃಷ್ಟಿಮಾಂದ್ಯ ಅಭ್ಯರ್ಥಿ.

ಟಿಪ್ಪಣಿಃ

(A) ಈ ಮೇಲಿನ ಹುದ್ದೆಗಳ ವರ್ಗೀಕರಣವನ್ನು ಈ ಕೆಳಗಿನ ಸರ್ಕಾರಿ ಆದೇಶಗಳನ್ನು ಆಧರಿಸಿ ವರ್ಗೀಕರಿಸಲಾಗಿದೆ.

1) ಸರ್ಕಾರಿ ಆದೇಶ ಸಂಖ್ಯೆಃ ಸಿಆಸುಇ 08 ಸೆನೆನಿ 95 ದಿನಾಂಕಃ 20-06-1995.
2) ಸರ್ಕಾರಿ ಆದೇಶ ಸಂಖ್ಯೆಃ ಸಿಆಸುಇ 53 ಸೆನೆನಿ 2007 ದಿನಾಂಕಃ 04-01-2008.
3) ಸರ್ಕಾರಿ ಆದೇಶ ಸಂಖ್ಯೆಃ ಸಿಆಸುಇ 128 ಸೆನೆನಿ 2006 ದಿನಾಂಕಃ 01-08-2009.

(B) ಒಂದು ವೇಳೆ ಅಧಿಸೂಚನೆಯಲ್ಲಿ ನಮೂದಿಸಿದ ವರ್ಗೀಕರಣಕ್ಕನುಸಾರವಾಗಿ ಅರ್ಹ ಅಂಗವಿಕಲ (ದೃಷ್ಟಿಮಾಂದ್ಯ) ಅಭ್ಯರ್ಥಿ ಲಭ್ಯವಾಗದಿದ್ದಲ್ಲಿ ಆ ಸ್ಥಾನಗಳಿಗೆ ಅದೇ ವರ್ಗದ ಅರ್ಹ ಇತರೆ ಅಭ್ಯರ್ಥಿಗಳನ್ನು ಭರ್ತಿ ಮಾಡಿಕೊಳ್ಳಲಾಗುವುದು.

ವಯೋಮಿತಿಃ

| | | | |
|---|---|---|---|
| ಕನಿಷ್ಠ ಃ- | 18 ವರ್ಷಗಳು | | |
| ಗರಿಷ್ಠ ಃ- | 1. ಸಾಮಾನ್ಯ ವರ್ಗ | ಃ | 35 ವರ್ಷ |
| | 2. 2-ಎ, 2-ಬಿ, 3-ಎ, 3-ಬಿ | ಃ | 38 ವರ್ಷ |
| | 3. ಪ.ಜಾ./ಪ.ಪಂ./ಪ್ರವರ್ಗ-1 | ಃ | 40 ವರ್ಷ |

ಸರ್ಕಾರಿ ಸೇವೆಯಲ್ಲಿರುವವರಿಗೆ, ವಿಧವೆಯರಿಗೆ, ಜೀತ ಕಾರ್ಮಿಕರಿಗೆ, ಮಾಜಿ ಸೈನಿಕರಿಗೆ ಹಾಗೂ ಅಂಗವಿಕಲರಿಗೆ ನಿಯಮಾನುಸಾರ ವಯೋಮಿತಿಯಲ್ಲಿ ಸಡಿಲಿಕೆ ನೀಡಲಾಗುವುದು.

ಅರ್ಜಿಯನ್ನು ಸ್ವೀಕರಿಸುವ ಕೊನೆಯ ದಿನಾಂಕಕ್ಕೆ ಮೇಲ್ಕಂಡ ಕನಿಷ್ಟ ವಯೋಮಿತಿಯನ್ನು ಹೊಂದಿರತಕ್ಕದ್ದು ಮತ್ತು ಗರಿಷ್ಟ ವಯೋಮಿತಿಯನ್ನು ಮೀರಿರಬಾರದು.

ಟಿಪ್ಪಣಿಃ ಗರಿಷ್ಠ ವಯೋಮಿತಿಯ ಸೌಲಭ್ಯ ಕೋರುವ ಅಭ್ಯರ್ಥಿಯು ವಿಧವೆಯಾಗಿದ್ದರೆ, ಅವರು ವಿಧವೆಯೆಂಬ ಬಗ್ಗೆ ತಹಶೀಲ್ದಾರರ ದರ್ಜೆಗೆ ಕಡಿಮೆ ಅಲ್ಲದ ರೆವಿನ್ಯೂ ಪ್ರಾಧಿಕಾರಿಯಿಂದ ಪಡೆದ ಪ್ರಮಾಣ ಪತ್ರವನ್ನು ಅರ್ಜಿಯೊಂದಿಗೆ ಲಗತ್ತಿಸಬೇಕು.

## ಶೈಕ್ಷಣಿಕ ವಿದ್ಯಾರ್ಹತೆಃ

1) ಶೀಘ್ರಲಿಪಿಗಾರರ ಹುದ್ದೆಗೆಃ-

1. ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗಾಗಿ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿರಬೇಕು.
2. ಕರ್ನಾಟಕ ಸಾರ್ವಜನಿಕ ಶಿಕ್ಷಣ ಇಲಾಖೆ ಅಥವಾ ಕರ್ನಾಟಕ ಸೆಕೆಂಡರಿ ಪ್ರೌಡ ಶಿಕ್ಷಣ ಪರೀಕ್ಷೆಗಳ ಮಂಡಳಿ ವತಿಯಿಂದ ನಡೆಸಲಾದ ಕನ್ನಡ ಮತ್ತು ಆಂಗ್ಲ ಭಾಷೆಗಳೆರಡರಲ್ಲಿ ಸೀನಿಯರ್ ದರ್ಜೆಯ ಬೆರಳಚ್ಚು ಹಾಗೂ ಶೀಘ್ರಲಿಪಿ ಪರೀಕ್ಷೆಗಳಲ್ಲಿ ಅಥವಾ ತತ್ಸಮಾನ ಪರೀಕ್ಷೆಗಳಲ್ಲಿ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಉತ್ತೀರ್ಣರಾಗಿರತಕ್ಕದ್ದು.

2) ಬೆರಳಚ್ಚುಗಾರರ ಹುದ್ದೆಗೆಃ-

1. ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗಾಗಿ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿರಬೇಕು.
2. ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ವತಿಯಿಂದ ನಡೆಸಲಾದ ಕನ್ನಡ ಮತ್ತು ಆಂಗ್ಲ ಭಾಷೆಗಳೆರಡರಲ್ಲಿ ಸೀನಿಯರ್ ದರ್ಜೆಯ ಬೆರಳಚ್ಚು ಪರೀಕ್ಷೆಗಳಲ್ಲಿ ಅಥವಾ ತತ್ಸಮಾನ ಪರೀಕ್ಷೆಗಳಲ್ಲಿ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಉತ್ತೀರ್ಣರಾಗಿರತಕ್ಕದ್ದು.

## ಆಯ್ಕೆ ವಿಧಾನ ಃ-

ಹುದ್ದೆಗಳನ್ನು ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು ಮತ್ತು ಕರ್ನಾಟಕ ಅಧೀನ ನ್ಯಾಯಾಲಯಗಳು (ಲಿಪಿಕ ಮತ್ತು ಇತರೆ ಹುದ್ದೆಗಳು) (ನೇಮಕಾತಿ) ನಿಯಮಗಳು 1982 ಹಾಗೂ (ತಿದ್ದುಪಡಿ) ನಿಯಮಗಳು 2007 ರ ಮೇರೆಗೆ ನೇರ ನೇಮಕಾತಿ ಮೂಲಕ ಆಯ್ಕೆ ಮಾಡಿಕೊಳ್ಳಲಾಗುವುದು.

ಶೀಘ್ರಲಿಪಿಗಾರರು ಹಾಗೂ ಬೆರಳಚ್ಚುಗಾರರು ಹುದ್ದೆಗಳಿಗೆ ಅಭ್ಯರ್ಥಿಗಳನ್ನು ಈ ಕೆಳಗಿನಂತೆ ಅರ್ಹತಾ ಪರೀಕ್ಷೆಯನ್ನು ಮತ್ತು ಸಂದರ್ಶನವನ್ನು ನಡೆಸಿ ಆಯ್ಕೆ ಮಾಡಿಕೊಳ್ಳಲಾಗುವುದು.

### ಶೀಘ್ರಲಿಪಿಗಾರರ ಹುದ್ದೆಗೆ ಃ-

1) ಅಭ್ಯರ್ಥಿಯು ನೇಮಕಾತಿ ಪ್ರಾಧಿಕಾರದಿಂದ ನಾಮ ನಿರ್ದೇಶಿಸಲ್ಪಟ್ಟ ಪರೀಕ್ಷಕರು ಪ್ರತಿ ನಿಮಿಷಕ್ಕೆ 120 ಪದಗಳ ವೇಗದಂತೆ 05 ನಿಮಿಷಗಳಲ್ಲಿ ನೀಡುವ ಉಕ್ತ ಲೇಖನವನ್ನು 45 ನಿಮಿಷಗಳಲ್ಲಿ ಲಿಪ್ಯಂತರಿಸತಕ್ಕದ್ದು.
2) ಈ ಪರೀಕ್ಷೆಯು ಗರಿಷ್ಠ 100 ಅಂಕಗಳದ್ದಾಗಿದ್ದು ಪರೀಕ್ಷೆಯಲ್ಲಿ ಉತ್ತೀರ್ಣತೆಗೆ ಕನಿಷ್ಠ 50 ಅಂಕಗಳನ್ನು ಪಡೆಯತಕ್ಕದ್ದು.
3) ಅರ್ಹತಾ ಪರೀಕ್ಷೆಯಲ್ಲಿ ಪಡೆದ ಶೇಕಡವಾರು ಅಂಕಗಳು, ಸಂದರ್ಶನದಲ್ಲಿ ಗಳಿಸುವ ಅಂಕಗಳು ಮತ್ತು ವಿದ್ಯಾರ್ಹತೆಯಲ್ಲಿ ಪಡೆದ ಶೇಕಡವಾರು ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

### ಬೆರಳಚ್ಚುಗಾರರ ಹುದ್ದೆಗೆ ಃ-

1) ಅಭ್ಯರ್ಥಿಯು ನೇಮಕಾತಿ ಪ್ರಾಧಿಕಾರದಿಂದ ನಾಮ ನಿರ್ದೇಶಿಸಲ್ಪಟ್ಟ ಅಧಿಕಾರಿಯವರು 15 ನಿಮಿಷಗಳ ಕಾಲ ನೀಡುವ ಉಕ್ತ ಲೇಖನವನ್ನು ಬೆರಳಚ್ಚುಪಡಿಸತಕ್ಕದ್ದು.
2) ಈ ಪರೀಕ್ಷೆಯು ಗರಿಷ್ಠ 100 ಅಂಕಗಳದ್ದಾಗಿದ್ದು ಪರೀಕ್ಷೆಯಲ್ಲಿ ಉತ್ತೀರ್ಣತೆಗೆ ಕನಿಷ್ಠ 50 ಅಂಕಗಳನ್ನು ಪಡೆಯತಕ್ಕದ್ದು.
3) ಅರ್ಹತಾ ಪರೀಕ್ಷೆಯಲ್ಲಿ ಪಡೆದ ಶೇಕಡವಾರು ಅಂಕಗಳು, ಸಂದರ್ಶನದಲ್ಲಿ ಗಳಿಸುವ ಅಂಕಗಳು ಮತ್ತು ವಿದ್ಯಾರ್ಹತೆಯಲ್ಲಿ ಪಡೆದ ಶೇಕಡವಾರು ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

## ನಿರೀಕ್ಷಣಾ ಅವಧಿ ಃ-

ನೇಮಕ ಹೊಂದಿದ ಅಭ್ಯರ್ಥಿಗಳು ಕರ್ನಾಟಕ ನಾಗರಿಕ ಸೇವಾ (ಪರಿವೀಕ್ಷಣೆ) ನಿಯಮಗಳು 1977ರ ಪ್ರಕಾರ ಎರಡು ವರ್ಷಗಳ ಪರಿವೀಕ್ಷಣಾ ಅವಧಿಯಲ್ಲಿರತಕ್ಕದ್ದು ಮತ್ತು ಸದರಿ ಅವಧಿಯಲ್ಲಿ ತಮ್ಮ ಹುದ್ದೆಗಳಿಗೆ ಯಾವುದಾದರೂ ಇಲಾಖಾ ಪರೀಕ್ಷೆಗಳನ್ನು ನಿಯಮದಡಿ ಗೊತ್ತುಪಡಿಸಿದ್ದರೆ ಅವುಗಳಲ್ಲಿ ಉತ್ತೀರ್ಣರಾಗಬೇಕು.

## ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ವಿಧಾನ :-

ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ತಮ್ಮ ನೇಮಕಾತಿ ಪ್ರಾಧಿಕಾರದಿಂದ ಅಧಿಸೂಚನೆಯೊಂದಿಗೆ ಲಗತ್ತಿಸಲಾದ ನಿಗದಿತ ನಮೂನೆಯಲ್ಲಿ ದೃಢೀಕರಣ ಪತ್ರವನ್ನು ಪಡೆದು ಸಲ್ಲಿಸತಕ್ಕದ್ದು.

ಅರ್ಜಿಯೊಂದಿಗೆ ಲಗತ್ತಿಸಬೇಕಾಗಿರುವ ದಾಖಲಾತಿಗಳು :

ಅಭ್ಯರ್ಥಿಗಳು ಈ ಕೆಳಕಂಡ ಪ್ರಮಾಣ ಪತ್ರಗಳ ಒಂದೊಂದು ಫೋಟೋ ಪ್ರತಿಗಳನ್ನು ಸ್ವದೃಢೀಕರಿಸಿ ಅರ್ಜಿಯೊಂದಿಗೆ ಲಗತ್ತಿಸಬೇಕು. ಯಾವುದೇ ಕಾರಣಕ್ಕೂ ಮೂಲ ದಾಖಲಾತಿಗಳನ್ನು ಲಗತ್ತಿಸತಕ್ಕದ್ದಲ್ಲ.

1) ಹುದ್ದೆಗಳಿಗೆ ನಿಗದಿಪಡಿಸಲಾದ ವಿದ್ಯಾರ್ಹತೆಯ ಎಲ್ಲಾ ವರ್ಷಗಳ ಅಂಕಪಟ್ಟಿಗಳು ಹಾಗೂ ಪ್ರಮಾಣ ಪತ್ರಗಳು
2) ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ : ವರ್ಗಾವಣೆ ಪ್ರಮಾಣ ಪತ್ರ : ಜನನ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉಧೃತ ಭಾಗ
3) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, 2ಎ, 2ಬಿ, 3ಎ ಮತ್ತು 3ಬಿ ಗಳ ಮೀಸಲಾತಿ ಪ್ರಮಾಣ ಪತ್ರಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಮೂನೆಗಳಲ್ಲಿ (ಮೀಸಲಾತಿ ಕೋರಿದ್ದಲ್ಲಿ ಹಾಗೂ ವಯೋಮಿತಿ ಸಡಿಲಿಕೆ ಕೋರಿದ್ದಲ್ಲಿ)
4) ಕನ್ನಡ ಮಾಧ್ಯಮಃ ಮಾಜಿ ಸೈನಿಕರುಃ ಯೋಜನಾ ನಿರಾಶ್ರಿತ ಸಂಬಂಧಿಸಿದಂತೆ ಮೀಸಲಾತಿ ಕೋರಿದ ಅಭ್ಯರ್ಥಿಗಳು ಸಂಬಂಧಿಸಿದ ಪ್ರಾಧಿಕಾರದಿಂದ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರಗಳನ್ನು ಪಡೆದಿರುವುದು.
5) ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ-1 ಮತ್ತು 2 ರಲ್ಲಿ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲುರುಜು ಪಡೆದು(ಮೀಸಲಾತಿ ಕೋರಿದ್ದಲ್ಲಿ) ಅದರ ಪ್ರತಿಯನ್ನು ಲಗತ್ತಿಸುವುದು.
6) ಅಂಗವಿಕಲತೆಯ ಕುರಿತು ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
7) ಅಭ್ಯರ್ಥಿಯು ವಾಸವಾಗಿರುವ ಸ್ಥಳದ ಇಬ್ಬರು ಗಣ್ಯ ವ್ಯಕ್ತಿಗಳಿಂದ ಪಡೆದ ನಡತೆ ಪ್ರಮಾಣ ಪತ್ರ ಲಗತ್ತಿಸತಕ್ಕದ್ದು. ಅದು ಅರ್ಜಿ ಸ್ವೀಕರಿಸುವ ಕೊನೆಯ ದಿನಾಂಕದಿಂದ 6 ತಿಂಗಳೊಳಗೆ ಪಡೆದದ್ದಿರಬೇಕು. ಅದಕ್ಕಿಂತಲೂ ಹಿಂದಿನದಾಗಿದ್ದರೆ ತಿರಸ್ಕರಿಸಲಾಗುವುದು.
8) ಶಾಲಾ ಮುಖ್ಯಸ್ಥರಿಂದ ಪಡೆದ ನಡತೆ ಪ್ರಮಾಣ ಪತ್ರ
9) 5-00 ರೂಪಾಯಿ ಅಂಚೆ ಚೀಟಿಯನ್ನೊಳಗೊಂಡ ಸ್ವ ವಿಳಾಸಿತ ಲಕೋಟೆ
10) ಅರ್ಜಿಯ ಮೇಲೆ ಅಭ್ಯರ್ಥಿಗಳು ತಮ್ಮ ಇತ್ತೀಚಿನ ಒಂದು ಭಾವಚಿತ್ರವನ್ನು ಅಂಟಿಸತಕ್ಕದ್ದು ಹಾಗೂ ಅದರ ಮೇಲೆ ತಮ್ಮ ಸಹಿಯನ್ನು ಹಾಕತಕ್ಕದ್ದು.
11) ಅಭ್ಯರ್ಥಿಯು ಭಾರತೀಯ ನಾಗರೀಕನಲ್ಲದಿದ್ದಲ್ಲಿ ಜಿಲ್ಲಾಧಿಕಾರಿ /ಜಿಲ್ಲಾ ದಂಡಾಧಿಕಾರಿಯವರು ನೀಡಿರುವ ನಾಗರೀಕ ದೃಢೀಕರಣ ಪತ್ರ.
12) ಸೇವಾ ನಿರತ ಅಭ್ಯರ್ಥಿಗಳು ಅರ್ಜಿಗಳ ಸ್ವೀಕೃತಿಗಾಗಿ ನಿಗದಿಪಡಿಸಲಾದ ದಿನಾಂಕದೊಳಗೆ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಪಡೆದಿರತಕ್ಕದ್ದು.
13) ಅಭ್ಯರ್ಥಿಗಳು ನಿವಾಸಿ ದೃಢೀಕರಣ ಪತ್ರವನ್ನು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು.

9) ಪ್ರಮುಖವಾದ ಸೂಚನೆಗಳು:

1) ಅರ್ಜಿಯನ್ನು ಈ ಅಧಿಸೂಚನೆಗೆ ಲಗತ್ತಿಸಿದ ನಮೂನೆಯಲ್ಲಿ ಪೂರ್ಣ ವಿವರಗಳೊಂದಿಗೆ ಸಲ್ಲಿಸತಕ್ಕದು. ಅಪೂರ್ಣ ವಿವರಗಳನ್ನೊಳಗೊಂಡ ಅರ್ಜಿಗಳನ್ನು ಪರಿಗಣಿಸುವುದಿಲ್ಲ.

*2) ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಹಾಗೂ ಮೀಸಲಾತಿಯಡಿಯಲ್ಲಿ ಅರ್ಜಿ ಸಲ್ಲಿಸಬಯಸುವವರು ಆಯಾ ಹುದ್ದೆಗಳಿಗೆ : ಮೀಸಲಾತಿಗಳಿಗೆ ಪ್ರತ್ಯೇಕವಾಗಿ ನಿಗಧಿತ ಅರ್ಜಿ ನಮೂನೆಯಲ್ಲಿ ಅರ್ಜಿ ಸಲ್ಲಿಸತಕ್ಕದ್ದು.*

3) ಅವನ/ಅವಳ ಅಭ್ಯರ್ಥಿಕೆಗಾಗಿ ಅಧಿಕಾರಿಗಳಿಂದಾಗಲೀ ಅಥವಾ ಅಧಿಕಾರೇತರರಿಂದಾಗಲೀ ಯಾವುದೇ ರೀತಿಯಲ್ಲಿ ಬಾಹ್ಯ ಬೆಂಬಲವನ್ನು ಪಡೆಯಲು ಪ್ರಯತ್ನಿಸುವ ಯಾವುದೇ ವ್ಯಕ್ತಿಯು ರಾಜ್ಯ ಸೇವೆಯ ನೇಮಕಾತಿಗೆ ಅರ್ಹನಾಗಿರುವುದಿಲ್ಲ.

4) ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮರುದಿನದಂದು ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕವಾಗುವುದು. ಕೊನೆಯ ದಿನಾಂಕದ ನಂತರ ಈ ಕಛೇರಿಗೆ ಬರುವ ಯಾವುದೇ ಅರ್ಜಿಗಳನ್ನು ಹಾಗೂ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ.

5) ಅರ್ಜಿಯಲ್ಲಿ ಹಾಗೂ ಅರ್ಜಿಯನ್ನು ಒಳಗೊಂಡಿರುವ ಲಕೋಟೆಯ ಮೇಲೆ ಅರ್ಜಿ ಸಲ್ಲಿಸಲಾಗುತ್ತಿರುವ ಹುದ್ದೆಯ ಹೆಸರನ್ನು ಕಡ್ಡಾಯವಾಗಿ ನಮೂದಿಸತಕ್ಕದ್ದು.

6) ಅಭ್ಯರ್ಥಿಗಳು ಅರ್ಜಿಯ ಮೇಲ್ಭಾಗದ ಬಲಗಡೆಯ ತುದಿಯಲ್ಲಿ ಕೋರಿರುವ ಮೀಸಲಾತಿಯನ್ನು ತಪ್ಪದೆ ನಮೂದಿಸತಕ್ಕದ್ದು.

7) ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಆಹ್ವಾನಿಸಿದ್ದಲ್ಲಿ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗತಕ್ಕದ್ದು.

8) ಅಭ್ಯರ್ಥಿಗಳಿಗೆ ಸಂದರ್ಶನದ ಬಗ್ಗೆ ಈ ಕಛೇರಿಯಿಂದ ಯಾವುದೇ ಮಾಹಿತಿಯು ಬಾರದೇ ಇದ್ದರೆ, ಅವರು ಸಂದರ್ಶನಕ್ಕೆ ಆಯ್ಕೆಯಾಗಿಲ್ಲ ಎಂದು ಭಾವಿಸತಕ್ಕದ್ದು ಮತ್ತು ಈ ರೀತಿ ತಿರಸ್ಕೃತ ಅರ್ಜಿಗಳ ಬಗ್ಗೆ ಅಥವಾ ಸಂದರ್ಶನಕ್ಕೆ ಅನರ್ಹರಾದ ಬಗ್ಗೆ ಯಾವುದೇ ಪತ್ರ ವ್ಯವಹಾರ ನಡೆಸಲು ಆಸ್ಪದವಿರುವುದಿಲ್ಲ.

9) ಅಭ್ಯರ್ಥಿಯು ಎಲ್ಲಾ ಪ್ರಮಾಣ ಪತ್ರಗಳು, ಅಂಕಪಟ್ಟಿಗಳು ಮುಂತಾದವುಗಳನ್ನು ಒಳಗೊಂಡ ಅರ್ಜಿಯನ್ನು *ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ದಾವಣಗೆರೆ, ದಾವಣಗೆರೆ ಜಿಲ್ಲೆ ಇವರಿಗೆ ದಿನಾಂಕ: 28-04-2018 ರ ಸಂಜೆ 5-00 ಗಂಟೆಯ ಒಳಗೆ ಅಥವಾ ಅದಕ್ಕೂ ಮುಂಚಿತವಾಗಿ ತಲುಪುವಂತೆ* ಕಳುಹಿಸಬೇಕು. ನಿಗದಿಪಡಿಸಿದ ಕೊನೆಯ ದಿನಾಂಕದ ತರುವಾಯ ಸಲ್ಲಿಸುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

10) ಅಭ್ಯರ್ಥಿಗಳು ಮೀಸಲಾತಿ ಕೋರಿ ಸಲ್ಲಿಸಿದ ನಿಗದಿತ ಪ್ರಮಾಣ ಪತ್ರ ಅಥವಾ ಇನ್ನಿತರ ಯಾವುದೇ ದಾಖಲಾತಿಗಳು ತಪಾಸಣಾ ಅವಧಿಯಲ್ಲಿ ಸುಳ್ಳೆಂದು ಕಂಡು ಬಂದರೆ ಅವರ ವಿರುದ್ಧ ಭಾರತೀಯ ದಂಡ ಸಂಹಿತೆ ಕಲಂಗಳಡಿ ಶಿಕ್ಷೆಗೆ ಗುರಿಪಡಿಸಲಾಗುವುದು ಮತ್ತು ಅವರ ಆಯ್ಕೆಯನ್ನು ರದ್ದುಪಡಿಸಲಾಗುವುದು.

11) ಅಭ್ಯರ್ಥಿಗಳು ಆಯ್ಕೆಗೊಂಡರೆ, ದಾವಣಗೆರೆ ಜಿಲ್ಲೆಯ ಯಾವುದೇ ನ್ಯಾಯಾಲಯದಲ್ಲಿಯಾದರೂ ಕಾರ್ಯ ನಿರ್ವಹಿಸಲು ಸಿದ್ಧರಿರತಕ್ಕದ್ದು.

Sd/-
(ಎಸ್.ಹೆಚ್ ಹೊಸಗೌಡರ್)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ದಾವಣಗೆರೆ.

ಅಭ್ಯರ್ಥಿಯು ಸರ್ಕಾರಿ ನೌಕರನಾಗಿದ್ದ ಪಕ್ಷದಲ್ಲಿ ನೇಮಕಾತಿ ಪ್ರಾಧಿಕಾರಗಳ ದೃಢೀಕರಣ ಪತ್ರ

ಶ್ರೀ/ಶ್ರೀಮತಿ -------------------- ಇವರು ನಮ್ಮ ಇಲಾಖೆಯಲ್ಲಿ -----------ಹುದ್ದೆಯಲ್ಲಿ ದಿನಾಂಕಃ ---------------ರಿಂದ ಸೇವೆ ಸಲ್ಲಿಸುತ್ತಿದ್ದು, ಅಭ್ಯರ್ಥಿಯ ನಡತೆಯು ಉತ್ತಮವಾಗಿದ್ದು ------------------ ಹುದ್ದೆಗೆ ಅರ್ಹರಿರುತ್ತಾರೆ ಮತ್ತು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ದಾವಣಗೆರೆ ಇವರ ಅಧಿಸೂಚನೆ ಸಂಖ್ಯೆಃ 01/2018 ರಡಿ ಆಹ್ವಾನಿಸಿರುವ--------------------ಹುದ್ದೆಗೆ ಅರ್ಜಿ ಸಲ್ಲಿಸಲು ಅನುಮತಿಯನ್ನು ನೀಡಲಾಗಿದೆ.

ಸ್ಥಳ ಃ ಪ್ರಾಧಿಕಾರದ ಸಹಿ

ದಿನಾಂಕಃ

:: ಅರ್ಜಿ ನಮೂನೆ ::

ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ದಾವಣಗೆರೆ ಜಿಲ್ಲೆ,
ದಾವಣಗೆರೆ - ಇವರಿಗೆ.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ದಾವಣಗೆರೆ ಇವರ ಅಧಿಸೂಚನೆ ಸಂಖ್ಯೆ: 01/2018, ದಿನಾಂಕ: 14/03/2018ರ ಮೇರೆಗೆ ವಿವಿಧ ಹುದ್ದೆಗಳಿಗೆ ಅರ್ಜಿಯನ್ನು ಸಲ್ಲಿಸಲು ಆಹ್ವಾನಿಸಿದ್ದುದರ ಮೇರೆಗೆ ನಾನು ________________ ಹುದ್ದೆಗೆ ________________ಮೀಸಲಾತಿ ವರ್ಗದಡಿ ಆಯ್ಕೆ ಬಯಸಿ ಈ ಕೆಳಗಿನ ವಿವರಗಳನ್ನೊಳಗೊಂಡ ಅರ್ಜಿಯನ್ನು ಸಲ್ಲಿಸುತ್ತಿದ್ದೇನೆ.

ಪಾಸ್‌ಪೋರ್ಟ್
ಅಳತೆಯ
ಭಾವಚಿತ್ರ.

| | | | |
|---|---|---|---|
| 1 | ಅಭ್ಯರ್ಥಿಯ ಹೆಸರು<br>(ಸ್ಪಷ್ಟವಾಗಿ ದಪ್ಪ ಅಕ್ಷರಗಳಲ್ಲಿ ಬರೆಯಬೇಕು | :: | |
| 2 | ಅಭ್ಯರ್ಥಿಯ ತಂದೆಯ : ತಾಯಿಯ : ಗಂಡನ : ಹೆಂಡತಿಯ:ಪೋಷಕರ ಹೆಸರು ಮತ್ತು ವೃತ್ತಿ | :: | |
| 3 | ಅಭ್ಯರ್ಥಿಯ ಪೂರ್ಣ ವಿಳಾಸ | :: | |
| 4 | ಅಭ್ಯರ್ಥಿಯು ಸ್ತ್ರೀಯರೇ ಅಥವಾ ಪುರುಷರೇ | :: | |
| 5 | ಹುಟ್ಟಿದ ದಿನಾಂಕ ಮತ್ತು ಅರ್ಜಿ ಸಲ್ಲಿಸಲು ನಿಗದಿ ಪಡಿಸಿದ ಕೊನೆಯ ದಿನಾಂಕಕ್ಕೆ ವಯಸ್ಸು, (ಸೂಕ್ತ ದಾಖಲೆಯನ್ನು ಲಗತ್ತಿಸಕ್ಕದ್ದು) | :: | |
| 6 | ಅಭ್ಯರ್ಥಿಯ ರಾಷ್ಟ್ರೀಯತೆ ಮತ್ತು ಜಾತಿ | :: | |
| 7 | ಅಭ್ಯರ್ಥಿಯು ಸಾ.ಅ.: ಪ.ಜಾ.: ಪ.ಪಂಗಡ :2ಎ :2ಬಿ :3ಎ :3ಬಿ ಗೆ ಸೇರಿರುವಿರಾ? ಅಂಗವಿಕಲರೇ?, ವಿಧವೆಯೇ? ಯೋಜನಾ ನಿರಾಶ್ರಿತರೇ? ಮಾಜಿ ಸೈನಿಕರೇ? ಮತ್ತು ಕನ್ನಡ ಮಾಧ್ಯಮದವರೇ?<br>(ಹಾಗಿದ್ದಲ್ಲಿ ಆ ಕುರಿತು ಸಕ್ಷಮ ಪ್ರಾಧಿಕಾರದಿಂದ ಪಡೆದ ನಕಲು ಪ್ರತಿಯನ್ನು ಲಗತ್ತಿಸತಕ್ಕದ್ದು) | :: | |

| | | | | | |
|---|---|---|---|---|---|
| 8 | ಅಭ್ಯರ್ಥಿಯು ಗ್ರಾಮೀಣ ಅಭ್ಯರ್ಥಿಯೇ? (ಹಾಗಿದ್ದಲ್ಲಿ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು) | ಃ | | | |
| 9 | ಶೈಕ್ಷಣಿಕ ವಿದ್ಯಾರ್ಹತೆ ಃ | | ಉತ್ತೀರ್ಣರಾದ ವರ್ಷ ಮತ್ತು ತಿಂಗಳು | ಗರಿಷ್ಠ ಅಂಕಗಳು | ಪಡೆದ ಅಂಕಗಳು |
| | 1) 10ನೇ ತರಗತಿ | ಃ | | | |
| | 2) ಕನ್ನಡ ಶೀಘ್ರಲಿಪಿ ಪ್ರೌಢದರ್ಜೆ | ಃ | | | |
| | 3) ಆಂಗ್ಲ ಶೀಘ್ರಲಿಪಿ ಪ್ರೌಢದರ್ಜೆ | ಃ | | | |
| | 4) ಕನ್ನಡ ಬೆರಳಚ್ಚು ಪ್ರೌಢದರ್ಜೆ | ಃ | | | |
| | 5) ಆಂಗ್ಲ ಬೆರಳಚ್ಚು ಪ್ರೌಢದರ್ಜೆ | ಃ | | | |
| | 6) ಕನ್ನಡ ಬೆರಳಚ್ಚು ಕಿರಿಯದರ್ಜೆ | ಃ | | | |
| | 7) ಆಂಗ್ಲ ಬೆರಳಚ್ಚು ಕಿರಿಯದರ್ಜೆ | ಃ | | | |
| 10 | ಗಣಕ ಯಂತ್ರ ವಿದ್ಯಾಭ್ಯಾಸ (ದಾಖಲಾತಿ ಲಗತ್ತಿಸುವುದು) | ಃ | | | |
| 11 | ಇತರೆ ಹೆಚ್ಚುವರಿ ವಿದ್ಯಾರ್ಹತೆ | ಃ | | | |
| 12 | ವಿವಾಹಿತರೇ ಃ ಅವಿವಾಹಿತರೇ ವಿವಾಹಿತರಾಗಿದ್ದಲ್ಲಿ ಒಂದಕ್ಕಿಂತ ಹೆಚ್ಚು ಜೀವಂತ ಪತಿ ಃ ಪತ್ನಿಯನ್ನು ಹೊಂದಿದ್ದೀರಾ? | ಃ | | | |
| 13 | ಅಭ್ಯರ್ಥಿಗಳು ಯಾವುದೇ ಅಪರಾಧಗಳನ್ನು ಎದುರಿಸುತ್ತಿರುವಿರಾ ಅಥವಾ ನಿಮ್ಮ ವಿರುದ್ಧ ಯಾವುದೇ ಅಪರಾಧವನ್ನು ನೋಂದಾಯಿಸಿ ಕೊಳ್ಳಲಾಗಿದೆಯೇ? | ಃ | | | |
| 14 | ಅಭ್ಯರ್ಥಿಗಳು ಯಾವುದಾದರೂ ಸರ್ಕಾರಿ ನೌಕರಿಯಲ್ಲಿದ್ದೀರಾ? | ಃ | | | |
| 15 | ಲಗತ್ತಿಸಿರುವ ದಾಖಲಾತಿಗಳು | ಃ | | | |

ಮೇಲ್ಕಂಡ ವಿವರಣೆಗಳು ಸತ್ಯವಾಗಿರುತ್ತವೆ ಹಾಗೂ ಸರಿಯಾಗಿರುತ್ತವೆ ಎಂದು ಪ್ರಮಾಣೀಕರಿಸುತ್ತೇನೆ. ಮೇಲ್ಕಂಡ ಮಾಹಿತಿಗಳು ಸುಳ್ಳು ಮಾಹಿತಿ ಎಂದು ತಿಳಿದು ಬಂದಲ್ಲಿ ಕಾನೂನು ರೀತ್ಯಾ ತೆಗೆದುಕೊಳ್ಳುವ ಕ್ರಮಕ್ಕೆ ಬದ್ಧನಾಗಿರುತ್ತೇನೆ.

ಸ್ಥಳ ಃ

ದಿನಾಂಕ ಃ

--------------------------

ಅಭ್ಯರ್ಥಿಯ ಸಹಿ

ನಂ.ಡಿಜೆ-ಡಿವಿಜಿ. /2018.

ನಕಲು ಪ್ರತಿಯನ್ನು :-

1) ಮಹಾವಿಲೇಖನಾಧಿಕಾರಿಗಳು, ಗೌ: ಉಚ್ಚ, ನ್ಯಾಯಾಲಯ, ಬೆಂಗಳೂರು, ಇವರಿಗೆ ಮಾಹಿತಿಗಾಗಿ ಮುಖಪತ್ರದೊಂದಿಗೆ ಸಲ್ಲಿಸಲಾಗಿದೆ.

ಈ ಅಧಿಸೂಚನೆಯನ್ನು ತಮ್ಮ ಕಚೇರಿಯ ಸೂಚನಾ ಫಲಕದಲ್ಲಿ ಸಾರ್ವಜನಿಕರ ಮಾಹಿತಿಗಾಗಿ ಅಂಟಿಸಲು ಕೋರಿ ಈ ಕೆಳಗಿನವರಿಗೆ ರವಾನಿಸಿದೆ.

2) ಈ ಜಿಲ್ಲೆಯ ಎಲ್ಲಾ ಪೀಠಸೀನಾಧಿಕಾರಿಗಳಿಗೆ.

3) ರಾಜ್ಯದ ಎಲ್ಲಾ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,

4) ಜಿಲ್ಲಾಧಿಕಾರಿಗಳು, ದಾವಣಗೆರೆ ಜಿಲ್ಲೆ, ದಾವಣಗೆರೆ.

5) ಜಿಲ್ಲಾ ಉದ್ಯೋಗ ವಿನಿಮಯ ಅಧಿಕಾರಿಗಳು, ದಾವಣಗೆರೆ.

6) ನಿರ್ದೇಶಕರು, ವಾರ್ತಾ, ಪ್ರಚಾರ ಮತ್ತು ಪ್ರವಾಸೋದ್ಯಮ ಇಲಾಖೆ, ಬೆಂಗಳೂರು, ಇವರಿಗೆ ಸಾದಿಲ್ವಾರು ವೆಚ್ಚ ಕೈಪಿಡಿ ನಿಯಮ 55 (ಬಿ)(ಡಿ) ಪ್ರಕಾರ 2 ಹೆಚ್ಚು ಪ್ರಸಾರ ಉಳ್ಳ ದಿನಪತ್ರಿಕೆಗಳಲ್ಲಿ ಉಚಿತವಾಗಿ ಪ್ರಚುರಪಡಿಸುವ ಕುರಿತು.

7) ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ, ಸರಕಾರಿ ಹೊರವಲಯ ಮುದ್ರಣಾಲಯ, ಮೈಸೂರು ರಸ್ತೆ, ಬೆಂಗಳೂರು _ 560 059, ಇವರಿಗೆ ಪ್ರಕಟಣೆಯನ್ನು ಮುಂದಿನ ರಾಜ್ಯ ಪತ್ರದಲ್ಲಿ ಉಚಿತವಾಗಿ ಪ್ರಕಟಿಸಿ ಪ್ರಕಟಣೆಯ 5 ಪ್ರತಿಗಳನ್ನು ಈ ನ್ಯಾಯಾಲಯಕ್ಕೆ ಸಲ್ಲಿಸಲು ಕೋರಲಾಗಿದೆ.

8) ಈ ಕಛೇರಿಯ ನೋಟೀಸ್ ಬೋರ್ಡಿಗೆ.

9) ಕಛೇರಿ ನಕಲು.

6) ಹೆಚ್ಚಿನ ಪ್ರತಿ.